ಇ) ದೊಡ್ಡಬಳ್ಳಾಪುರ ತಾಲ್ಲೂಕಿಗೆ ಹೊಸದಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯ ಮಂಜೂರಾಗಿದೆಯೇ; ಹಾಗಿದ್ದಲ್ಲಿ ಇದು ಯಾವ ಹಂತದಲ್ಲಿದೆ; ಯಾವಾಗ ಕೆಲಸ ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ)

	ವಿದ್ಯಾರ್ಥಿನಿಲಯಗಳ ಸಂಖ್ಯೆ	ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ
ಪ. ಜಾತಿ	68	4547
ಪ. ಪಂಗಡ	02	100
ಆ) ಪ.ಜಾತಿ	07	564
ಪ. ಪಂಗಡ	-	

ಇ) 1996-1997ನೇ ಸಾಲಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಹೊಸಹಳ್ಳಿಗೆ ಹಾಗೂ 1997-1998 ನೇ ಸಾಲಿನಲ್ಲಿ ಸಕ್ಕರೆಗೊಳ್ಳಹಳ್ಳಿಗೆ ಒಂದೊಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಗಳನ್ನು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಮಂಜೂರು ಮಾಡಲಾಗಿದೆ ಹೊಸಹಳ್ಳಿಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ರೂ.20.30 ಲಕ್ಷಗಳ ಅಂದಾಜಿನಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ರೂ.6.40 ಲಕ್ಷಗಳನ್ನು ಕರ್ನಾಟಕ ಭೂಸೇನಾ ನಿಗಮಕ್ಕೆ ಬಿಡುಗಡೆ ಮಾಡಿದೆ. ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲಾಗುವುದು. ಸಕ್ಕರೆಗೊಳ್ಳಹಳ್ಳಿಯ ವಿದ್ಯಾರ್ಥಿನಿಲಯದ ಕಟ್ಟಡದ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಪಡೆಯಲು ಕ್ರಮ ಕೈಗೊಂಡಿದ್ದು ನಿವೇಶನ ಮಂಜೂರಾತಿಯನ್ನು ಅನುಸರಿಸಿ ಕಟ್ಟಡದ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯವತಿಯಿಂದ ದೊಡ್ಡಬಳ್ಳಾಪುರದ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯವು ಮಂಜೂರಾಗಿರುವುದಿಲ್ಲ.

ಸರ್ಕಾರದ ಅನುದಾನ ಪಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗಗಳ ವೇತನ ಹೆಚ್ಚಿಸುವಿಕೆ.

2672 (3429) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) ತುರುವೇಕೆರೆ):— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

E-6-II

ಅ) ಸರ್ಕಾರದ ಅನುದಾನ ಪಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗದವರ ವೇತನ ತುಂಬಾ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಸರ್ಕಾರವು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗಕ್ಕೆ ಕೊಡುವ ತಿಂಗಳ ವೇತನಕ್ಕೆ ಸಮನಾಗಿ ಮಾಹೆಯಾನ ವೇತನ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಇವುಗಳನ್ನು ಖಾಲಿ ಇರುವ ಸಿಬ್ಬಂದಿಗಳನ್ನು ತಕ್ಷಣ ತುಂಬಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಸರ್ಕಾರದ ಆದೇಶ ಸಂಖ್ಯೆ : ಎಸ್‌ಡಬ್ಲ್ಯೂಎಲ್ : 248 : ಎಸ್‌ಬಿಸಿ : 77 ದಿನಾಂಕ: 20.12.1977 ರನ್ವಯ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗದವರಿಗೆ ಕೆಳಗಿನಂತೆ ಗೌರವಧನವನ್ನು ಮಂಜೂರು ಮಾಡಲಾಗುತ್ತಿದೆ.

1) ಮೇಲ್ವಿಚಾರಕರು	-ತಿಂಗಳಿಗೆ 125.00 ರಂತೆ	12 ತಿಂಗಳುಗಳು
2) ಅಡಿಗೆಯವರು	-ತಿಂಗಳಿಗೆ 100.00 ರಂತೆ	12 ತಿಂಗಳುಗಳು
3) ಅಡಿಗೆ ಸಹಾಯಕರು	-ತಿಂಗಳಿಗೆ 75.00 ರಂತೆ	12 ತಿಂಗಳುಗಳು

ಆ) ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರು ಸರ್ಕಾರದಿಂದ ನೇಮಕಗೊಂಡ ನೌಕರರಾಗಿರುವುದಿಲ್ಲ. ಆದ್ದರಿಂದ ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿನ ನೌಕರರಿಗೆ ಸರಿಸಮಾನವಾಗಿ ವೇತನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಖಾಲಿ ಹುದ್ದೆಗಳನ್ನು ತುಂಬುವುದು ಆಡಳಿತ ಮಂಡಳಿಯವರಿಗೆ ಸಂಬಂಧಪಟ್ಟಿರುತ್ತದೆ.

ತುರುವೇಕೆರೆ ತಾಲ್ಲೂಕಿನಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗೆ ಹಣ ಬಿಡುಗಡೆ

2673 (3430) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ)(ತುರುವೇಕೆರೆ) :— ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುರುವೇಕೆರೆ ತಾಲ್ಲೂಕಿನಲ್ಲಿ ಕೈಗಾರಿಕೋದ್ಯಮಕ್ಕಾಗಿ ಎಷ್ಟು ಅರ್ಜಿಗಳು ಬಂದಿವೆ;